# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2024-25 ನೇ ಸಾಲಿನಲ್ಲಿ ಅತೀವೃಷ್ಟಿ / ಪ್ರವಾಹದಿಂದ ಉಂಟಾದ ಬೆಳೆಹಾನಿಗೆ ಪರಿಹಾರವನ್ನು ಪಾವತಿಸಲು ಜಿಲ್ಲಾಧಿಕಾರಿಗಳಿಗೆ ರಾಜ್ಯ ವಿಪತ್ತು ಪರಿಹಾರ ನಿಧಿಯಿಂದ (SDRF) ಅನುದಾನವನ್ನು ಬಿಡುಗಡೆಗೊಳಿಸುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಕಂಇ 214 ಟಿಎನ್ಆರ್ 2024, ದಿನಾಂಕ: 16.08.2024.
2. ಜಿಲ್ಲಾಧಿಕಾರಿ, ಬೆಳಗಾವಿ ಜಿಲ್ಲೆ ರವರ ಪತ್ರ ಸಂಖ್ಯೆ: ಎಬಿ/ಎಫ್.ಎಫ್.ಎಲ್/ಸಿಆರ್-80/2024-25, ದಿನಾಂಕ: 04.10.2024.
3. ಜಿಲ್ಲಾಧಿಕಾರಿ, ಬಾಗಲಕೋಟೆ ಜಿಲ್ಲೆ ರವರ ಪತ್ರ ಸಂಖ್ಯೆ: ಜಿಅಬಾ/ಸಿಎಎಲ್/ಸಿಆರ್/35/2024-25, ದಿನಾಂಕ: 05.10.2024.
4. ಜಿಲ್ಲಾಧಿಕಾರಿ, ಬೀದರ್ ಜಿಲ್ಲೆ ರವರ ಪತ್ರ ಸಂಖ್ಯೆ: ಕಂ/ಸಿಎಎಲ್/ಸಿಆರ್-03/2024-25, ದಿನಾಂಕ: 05.10.2024.
5. ಸರ್ಕಾರದ ಆದೇಶ ಸಂಖ್ಯೆ: ಆಇ 247 ಬಿಆರ್ಎಸ್ 2024, ದಿನಾಂಕ: 11.11.2024.

* * * * *

**ಪ್ರಸ್ತಾವನೆ:**

2024-25ನೇ ಸಾಲಿನಲ್ಲಿ ನೈಸರ್ಗಿಕ ವಿಕೋಪಗಳಿಂದ ಸ್ಥಳೀಯವಾಗಿ ಉಂಟಾಗುವ ಬೆಳೆ ಹಾನಿಗೆ ಕೇಂದ್ರ ಸರ್ಕಾರದ ಗೃಹ ಮಂತ್ರಾಲಯವು ದಿನಾಂಕ: 11.07.2023 ರಂದು ಹೊರಡಿಸಿರುವ Revised Items of Expenditure and Norms of assistance from the State Disaster Response Fund (SDRF) ರ ಮಾರ್ಗಸೂಚಿಗಳನ್ವಯ ನಿಯಮಾನುಸಾರ ರಾಜ್ಯ ವಿಪತ್ತು ಪರಿಹಾರ ನಿಧಿಯಿಂದ ಪಾವತಿಸಬಹುದಾದ ಪರಿಹಾರ ಮೊತ್ತವನ್ನು ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾಧಿಕಾರಿಗಳ ಹಂತದಲ್ಲಿಯೇ ಪರಿಹಾರ ತಂತ್ರಾಂಶದ ಮುಖಾಂತರ ಮಾತ್ರವೇ ನಿಯಮಾನುಸಾರ ಅರ್ಹ ರೈತ ಫಲಾನುಭವಿಗಳಿಗೆ ಅರ್ಹತೆಗನುಗುಣವಾಗಿ ಪಾವತಿಸಲು, ಕಾರ್ಯವಿಧಾನ ಹಾಗೂ ಷರತ್ತು / ನಿಬಂಧನೆಗಳನ್ನು ಮೇಲೆ ಓದಲಾದ (1) ರ ಆದೇಶದಲ್ಲಿ ನಿಗದಿಪಡಿಸಲಾಗಿದೆ.

2024-25 ನೇ ಸಾಲಿನಲ್ಲಿ ಅತೀವೃಷ್ಟಿ / ಪ್ರವಾಹದಿಂದ ಉಂಟಾದ ಬೆಳೆಹಾನಿಗೆ ಪರಿಹಾರ ಮೊತ್ತವನ್ನು ನಿಯಮಾನುಸಾರ ಅರ್ಹ ಫಲಾನುಭವಿಗಳಿಗೆ ಪಾವತಿಸಲು, ಪಿ.ಡಿ. ಖಾತೆಯಲ್ಲಿ ಅನುದಾನದ ಕೊರತೆ ಇರುವುದರಿಂದ, ಬೆಳೆಹಾನಿ ಪರಿಹಾರವನ್ನು ಜಿಲ್ಲಾಧಿಕಾರಿಗಳ ಹಂತದಲ್ಲಿ ಪಾವತಿಸುವಂತೆ ಆದೇಶಿಸಿರುವುದರಿಂದ, ಪಿ.ಡಿ ಖಾತೆಗೆ, ಬೆಳೆಹಾನಿ ಪರಿಹಾರವನ್ನು ಪಾವತಿಸಲು ಅನುದಾನವನ್ನು ಬಿಡುಗಡೆಗೊಳಿಸುವಂತೆ ಮೇಲೆ ಓದಲಾದ (2) ರಿಂದ (4) ರ ಪತ್ರಗಳಲ್ಲಿ ಜಿಲ್ಲಾಧಿಕಾರಿ, ಬೆಳಗಾವಿ ಜಿಲ್ಲೆ, ಬಾಗಲಕೋಟೆ ಜಿಲ್ಲೆ ಮತ್ತು ಬೀದರ್ ಜಿಲ್ಲೆ ರವರು ಕ್ರಮವಾಗಿ ಕೋರಿರುತ್ತಾರೆ.

.....2

ರಾಜ್ಯ ವಿಪತ್ತು ಪರಿಹಾರ ನಿಧಿಯ ಲೆಕ್ಕ ಶೀರ್ಷಿಕೆಯಾದ 2245-80-102-0-01-059 ಗೆ, ಲೆಕ್ಕ ಶೀರ್ಷಿಕೆಯಾದ 2245-80-102-0-01-051 ರಿಂದ ರೂ.5000.00 ಲಕ್ಷಗಳನ್ನು ಹಾಗೂ ಲೆಕ್ಕ ಶೀರ್ಷಿಕೆಯಾದ 2245-80-102-0-01-140 ರಿಂದ ರೂ.5000.00 ಲಕ್ಷಗಳನ್ನು ಮೇಲೆ ಓದಲಾದ (5) ರ ಸರ್ಕಾರಿ ಆದೇಶದಲ್ಲಿ ಪುನರ್ ವಿನಿಯೋಗ ಮಾಡಲಾಗಿರುತ್ತದೆ.

ಬೆಳಗಾವಿ, ಬಾಗಲಕೋಟೆ ಮತ್ತು ಬೀದರ್ ಜಿಲ್ಲೆಗಳ ಜಿಲ್ಲಾಧಿಕಾರಿಗಳ ಪ್ರಸ್ತಾವನೆ / ಕೋರಿಕೆಯನ್ನು ಕೂಲಂಕಷವಾಗಿ ಪರಿಶೀಲಿಸಿ, 2024-25 ನೇ ಸಾಲಿನಲ್ಲಿ ಅತೀವೃಷ್ಟಿ / ಪ್ರವಾಹದಿಂದ ಉಂಟಾದ ಬೆಳೆಹಾನಿಗೆ ಪರಿಹಾರವನ್ನು ಜಿಲ್ಲಾಧಿಕಾರಿರವರ ಹಂತದಲ್ಲಿಯೇ ಪಿ.ಡಿ. ಖಾತೆಯಿಂದ ಪಾವತಿಸಲು ಅನುವಾಗುವಂತೆ, ಸದರಿ ಬೆಳಗಾವಿ, ಬಾಗಲಕೋಟೆ ಮತ್ತು ಬೀದರ್ ಜಿಲ್ಲೆಗಳ ಜಿಲ್ಲಾಧಿಕಾರಿಗಳ ಪಿ.ಡಿ. ಖಾತೆಗೆ, ರಾಜ್ಯ ವಿಪತ್ತು ಪರಿಹಾರಿ ನಿಧಿ ಲೆಕ್ಕ ಶೀರ್ಷಿಕೆ 2245-80-102-0-01-059 ರಿಂದ ಅವಶ್ಯಕ ಅನುದವನ್ನು ಬಿಡುಗಡೆ ಮಾಡಲು ಸರ್ಕಾರವು ತೀರ್ಮಾನಿಸಿ, ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಕಂಇ 256 ಟಿಎನ್ಆರ್ 2024,**

**ಬೆಂಗಳೂರು; ದಿನಾಂಕ:13.11.2024.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2024-25 ನೇ ಸಾಲಿನಲ್ಲಿ ಅತೀವೃಷ್ಟಿ / ಪ್ರವಾಹದಿಂದ ಉಂಟಾದ ಬೆಳೆಹಾನಿಗೆ ಪರಿಹಾರವನ್ನು ಜಿಲ್ಲಾಧಿಕಾರಿರವರ ಹಂತದಲ್ಲಿಯೇ ದಿನಾಂಕ: 16.08.2024 ರ ಸರ್ಕಾರದ ಆದೇಶ ಸಂಖ್ಯೆ: ಕಂಇ 214 ಟಿಎನ್ಆರ್ 2024 ರಲ್ಲಿ ವಿಧಿಸಿರುವ ಷರತ್ತುಗಳ ಪಾಲನೆಗೆ ಒಳಪಟ್ಟು, ಅರ್ಹತೆಯಂತೆ ನಿಯಮಾನುಸಾರ ಬೆಳೆಹಾನಿ ಪರಿಹಾರ ಮೊತ್ತವನ್ನು ಪಾವತಿಸಲು ಅನುವಾಗುವಂತೆ, ಬೆಳಗಾವಿ, ಬಾಗಲಕೋಟೆ ಮತ್ತು ಬೀದರ್ ಜಿಲ್ಲೆಗಳ ಜಿಲ್ಲಾಧಿಕಾರಿಗಳ ಪಿ.ಡಿ. ಖಾತೆಗೆ, ರಾಜ್ಯ ವಿಪತ್ತು ಪರಿಹಾರಿ ನಿಧಿ ಲೆಕ್ಕ ಶೀರ್ಷಿಕೆ 2245-80-102-0-01-059 ರಿಂದ ಕೆಳಕಂಡಂತೆ ಅನುದಾನವನ್ನು ಬಿಡುಗಡೆ ಮಾಡಿ ಆದೇಶಿಸಿದೆ.

| ಕ್ರ. ಸಂ. | ಜಿಲ್ಲೆಯ ಹೆಸರು | ಬಿಡುಗಡೆ ಮಾಡಿರುವ ಅನುದಾನದ ಮೊತ್ತ (ರೂ.ಕೋಟಿಗಳಲ್ಲಿ) |
|---|---|---|
| 1 | ಬೆಳಗಾವಿ | 10.00 |
| 2 | ಬಾಗಲಕೋಟೆ | 15.00 |
| 3 | ಬೀದರ್ | 10.00 |
| | **ಒಟ್ಟು** | **35.00** |

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ: ಆಇ 635/ವೆಚ್ಚ-7/2024, ದಿನಾಂಕ: 12.11.2024 ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Mukthar Pasha. H G 13/11/2024
(ಮುಕ್ತಾರ್ ಪಾಷ. ಹೆಚ್.ಜಿ.)
ಸರ್ಕಾರದ ಅಧೀನ ಕಾರ್ಯದರ್ಶಿ,
ಕಂದಾಯ ಇಲಾಖೆ,
(ವಿಪತ್ತು ನಿರ್ವಹಣೆ ಮತ್ತು ಸೇವೆಗಳು-3)

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (A&E) ಹಾಗೂ (E & RSA), ಕರ್ನಾಟಕ, ಪಿ.ಬಿ.ನಂ. 5369, ಪಾರ್ಕ್ ಹೌಸ್ ರೋಡ್, ಬೆಂಗಳೂರು.

.....3

2. ಪ್ರಧಾನ ಮಹಾಲೇಖಪಾಲರು (G & SSA), ಕರ್ನಾಟಕ, ಪಿ.ಬಿ.ನಂ. 5398, ಪಾರ್ಕ್ ಹೌಸ್ ರೋಡ್, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
4. ಆಯುಕ್ತರು, ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ), ಬೆಂಗಳೂರು.
5. ಜಿಲ್ಲಾಧಿಕಾರಿಗಳು - ಬೆಳಗಾವಿ ಬಾಗಲಕೋಟೆ ಮತ್ತು ಬೀದರ್ ಜಿಲ್ಲೆಗಳು.
6. ಜಂಟಿ ನಿರ್ದೇಶಕರು, ಖಜಾನೆ ಆಯುಕ್ತಾಲಯ, ಕೆ.ಪಿ.ಸಿ.ಎಲ್ ಹಸಿರು ಕಟ್ಟಡ, ಅರಮನೆ ರಸ್ತೆ, ಬೆಂಗಳೂರು.
7. ಉಪ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-7 & 8), ವಿಧಾನ ಸೌಧ, ಬೆಂಗಳೂರು.

**ಪ್ರತಿ:**

1. ಮಾನ್ಯ ಕಂದಾಯ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
2. ಮಾನ್ಯ ಮುಖ್ಯ ಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿರವರುಗಳ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ) ಬಹುಮಹಡಿ ಕಟ್ಟಡ, ಬೆಂಗಳೂರು.
4. ಸರ್ಕಾರದ ಉಪ ಕಾರ್ಯದರ್ಶಿ ರವರ ಆಪ್ತ ಸಹಾಯಕರು, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ), ಬಹುಮಹಡಿ ಕಟ್ಟಡ, ಬೆಂಗಳೂರು.
5. ಲೆಕ್ಕ ಪತ್ರ ಶಾಖೆ, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ).
6. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.